ಹಿರಿಯ ಸಿವಿಲ್ ನ್ಯಾಯಾಧೀಶರು ಮತ್ತು ಪ್ರಧಾನ ಪ್ರ.ದ.ನ್ಯಾ.ದಂ., ರವರ ನ್ಯಾಯಾಲಯದಲ್ಲಿ, ತರೀಕೆರೆ.
ಸಿಸಿ ನಂಬರ್:- 214/2024

ಸಾಕ್ಷಿಯ ಹೆಸರು : ಶಂಕರಪ್ಪ ಸಿ.ಡಬ್ಲ್ಯೂ 1
ತಂದೆಯ ಹೆಸರು : ತಿಮ್ಮಪ್ಪ ಪಿ.ಡಬ್ಲ್ಯೂ 2

ವಯಸ್ಸು : 32 ವರ್ಷ

ಉದ್ಯೋಗ : ವ್ಯವಸಾಯ

ವಾಸ ಸ್ಥಳ : ಬಂಕನಕಟ್ಟೆ

ದಿನಾಂಕ:29.09.2025 ರಂದು ಸಾಕ್ಷಿಗೆ ಪ್ರಮಾಣ ವಚನ ಬೋಧಿಸಲಾಯಿತು

ಮುಖ್ಯ ವಿಚಾರಣೆ: ಮಾನ್ಯ ಸ.ಸ.ಅ. ರವರಿಂದ:-

ಆರೋಪಿಯ ಪರಿಚಯ ನನಗೆ ಇರುವುದಿಲ್ಲ, ಈ ಮೊದಲು ನಾನು ಆತನನ್ನು ನೋಡಿರುವುದಿಲ್ಲ. ಈ ಪ್ರಕರಣದ ಬಗ್ಗೆ ನನಗೆ ಯಾವುದೇ ಮಾಹಿತಿ ಇಲ್ಲ. ಈಗ 1 ವರ್ಷದ ಹಿಂದೆ ಪೋಲೀಸರು ಸಹಿ ಮಾಡು ಎಂದಿದ್ದಕ್ಕೆ ಒಂದು ದಾಖಲೆಗೆ ಸಹಿ ಮಾತ್ರ ಮಾಡಿದ್ದೇನೆ. ಪೋಲೀಸರು ನನ್ನ ಸಮಕ್ಷಮ ಯಾವುದೇ ಪಂಚನಾಮೆ ಮಾಡಿಲ್ಲ ಮತ್ತು ಯಾವುದೇ ವಸ್ತುಗಳನ್ನು ಅಮಾನತ್ತು ಪಡಿಸಿಕೊಂಡಿಲ್ಲ. ಸಾಕ್ಷಿಯ ಸಹಿ ಇರುವ ದಾಖಲೆ ಪಂಚನಾಮೆ ಆಗಿದ್ದು ಈಗಾಗಲೇ ನಿಪಿ-1 ಎಂದು ಗುರುತಿಸಲಾಗಿದ್ದು ಸಾಕ್ಷಿಯ ಸಹಿಯನ್ನು 1(ಬಿ) ಎಂದು ಗುರುತಿಸಲಾಯಿತು.

(ಸಾಕ್ಷಿಯನ್ನು ಭಾಗಶಃ ಪ್ರತಿಕೂಲ ಸಾಕ್ಷಿ ಅಂತ ಪರಿಗಣಿಸಿ ಪಾಟೀ ಸವಾಲು ಮಾಡಲು ಮಾನ್ಯ ಸ.ಸ.ಅ. ರವರು ಅನುಮತಿ ಕೋರಿದ್ದು ಅನುಮತಿ ನೀಡಲಾಯಿತು)

ಪಾಟೀ ಸವಾಲು: ಮಾನ್ಯ ಸ.ಸ.ಅ.ರವರಿಂದ:-

ದಿನಾಂಕ 11.04.2023 ರಂದು ಪೋಲೀಸರು ನನ್ನನ್ನು ಹುಣಸಘಟ್ಟ ಕ್ರಾಸ್ ಹತ್ತಿರ ಕರೆಯಿಸಿ ಆರೋಪಿಯ ಮೇಲಲೆ ದಾಳಿ ಮಾಡಿ ಆತನ ಕಡೆಯಿಂದ ಒಟ್ಟು 90 ಮಿ.ಲಿ ಯ 144 ಹೈವೇ ಡಿಲಕ್ಸ್ ವಿಸ್ಕಿ ಟೆಟ್ರಾ ಪ್ಯಾಕೇಟುಗಳನ್ನು ಮತ್ತು ವಾಹನ ಸಂಖ್ಯೆ.ಕೆ.ಎ.66 ಕೆ.6964 ನೇದ್ದನ್ನು ಅಮಾನತ್ತು ಪಡಿಸಿಕೊಂಡು, ಸ್ಥಳದಲ್ಲಿಯೇ ಪಂಚನಾಮೆಯನ್ನು ಬರೆದು ನನ್ನ ಮತ್ತು ಸಿದ್ದರಾಮಪ್ಪ ಇವರುಗಳು ಸಹಿಗಳನ್ನು ಪಡೆದುಕೊಂಡಿರುತ್ತಾರೆ ಎಂದರೆ ಸರಿಯಲ್ಲ. ಈ ಬಗ್ಗೆ ನಾನು ಪೋಲೀಸರಿಗೆ ಹೇಳಿಕೆಯನ್ನು ಕೂಡ ಕೊಟ್ಟಿರುತ್ತೇನೆ ಎಂದರೆ ಸರಿಯಲ್ಲ. ಸಾಕ್ಷಿಯು ಅಲ್ಲಗಳೆದ ಹೇಳಿಕೆಯನ್ನು ನಿಪಿ-3 ಎಂದು ಗುರುತಿಸಲಾಯಿತು. ಆರೋಪಿಗೆ ಸಹಾಯ ಮಾಡಲು ಸುಳ್ಳು ಸಾಕ್ಷ್ಯ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ.

ಮರುವಿಚಾರಣೆ : ಇಲ್ಲ:

(ತೆರೆದ ನ್ಯಾಯಾಲಯದಲ್ಲಿ ಸಾಕ್ಷಿಯ ಹೇಳಿಕೆಯನ್ನು ನನ್ನ ಉಕ್ತಲೇಖನಕ್ಕೆ ಬೆರಳಚ್ಚು ಮಾಡಲಾಯಿತು.)

ಓ ಹೇ ಕೇ ಸ ಇ ಎ ಒ

ಸಹಿ/-
ಹಿರಿಯ ಸಿವಿಲ್ ನ್ಯಾಯಾಧೀಶರು ಮತ್ತು ಪ್ರಧಾನ
ಪ್ರ.ದ.ನ್ಯಾ.ದಂ., ರವರ ನ್ಯಾಯಾಲಯ, ತರೀಕೆರೆ.